# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 724

**ಮಾನ್ಯ ಸದಸ್ಯರ ಹೆಸರು** : ಶ್ರೀ ಪ್ರತಾಪಸಿಂಹ ನಾಯಕ್ ಕೆ.
(ವಿಧಾನಸಭೆಯಿಂದ ಚುನಾಯಿತರಾದವರು)

**ಉತ್ತರಿಸಬೇಕಾದ ದಿನಾಂಕ** : 19-09-2022

**ಉತ್ತರಿಸುವ ಸಚಿವರು** : ಪ್ರವಾಸೋದ್ಯಮ, ಜೀವಿಶಾಸ್ತ್ರ, ಹಾಗೂ ಪರಿಸರ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಪರಿಸರ ಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗೂ ರೂಪಿಸಿರುವ ಪ್ರವಾಸಿ ಸ್ನೇಹಿ ಯೋಜನೆಗಳೇನು;</td><td>ಕರ್ನಾಟಕ ಪ್ರವಾಸೋದ್ಯಮ ನೀತಿ 2020-26ರ ಅಡಿಯಲ್ಲಿ ರಾಜ್ಯದಲ್ಲಿ ಗುರುತಿಸಲಾದ ಪ್ರವಾಸಿ ತಾಣಗಳಲ್ಲಿ ಪ್ರವಾಸೋದ್ಯಮ ಯೋಜನೆಗಳಲ್ಲಿ ಪರಿಸರ ಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮ ಉಪಕ್ರಮಗಳನ್ನು ಅಳವಡಿಸಿ ಕೊಂಡಿರುವ ಹಾಗೂ ಇಲಾಖೆಯಲ್ಲಿ ನೋಂದಾಯಿತವಾಗಿರುವ ಸಂಸ್ಥೆಗಳಿಗೆ ಈ ಕೆಳಕಂಡಂತೆ ಆರ್ಥಿಕ ನೆರವನ್ನು ನೀಡಲು ಪ್ರಸ್ತಾಪಿಸಲಾಗಿದೆ.
<table>
<tr><th>ಕ್ರ. ಸಂ</th><th>ಕ್ರಮ</th><th>ಆರ್ಥಿಕ ನೆರವು</th><th>ಪ್ರತಿ ಪ್ರವಾಸೋದ್ಯಮ ಯೋಜನೆಯ ಸಹಾಯಧನಕ್ಕೆ ಸಂಬಂಧಿಸಿದ ಗರಿಷ್ಠ ಮೊತ್ತ</th></tr>
<tr><td>1</td><td>ಜಲ ಸಂರಕ್ಷಣೆ ಮತ್ತು ಮಳೆ ನೀರು ಸಂಗ್ರಹ</td><td>ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು</td><td>ರೂ.1.00 ಲಕ್ಷ</td></tr>
<tr><td>2</td><td>ನವೀಕರಿಸಬಹುದಾದ ಇಂಧನ ಮೂಲಗಳ ಅಳವಡಿಕೆ</td><td>ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು</td><td>ರೂ.1.00 ಲಕ್ಷ</td></tr>
<tr><td>3</td><td>ಮಾಲಿನ್ಯ ನಿಯಂತ್ರಣ ಕ್ರಮಗಳ ಅಳವಡಿಕೆ</td><td>ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು</td><td>ರೂ.1.00 ಲಕ್ಷ</td></tr>
</table>
</td></tr>
<tr><td>ಆ)</td><td>ರಾಜ್ಯದಲ್ಲಿ 'ಹೆಲಿ ಟ್ಯೂರಿಸಂ' ಯೋಜನೆಯಡಿ ಇದುವರೆಗೆ ಎಷ್ಟು ಪ್ರವಾಸಿ ತಾಣಗಳನ್ನು ಪರಿಗಣಿಸಲಾಗಿದೆ;</td><td>'ಹೆಲಿ ಟೂರಿಸಂ' ಯೋಜನೆಯಲ್ಲಿ ಪ್ರಾಥಮಿಕ ಹಂತವಾಗಿ ಬೆಂಗಳೂರು (ಜಕ್ಕೂರು), ಹಂಪಿ, ಕೊಡಗು, ಕಬಿನಿ, ಮೈಸೂರು ಹಾಗೂ ಧರ್ಮಸ್ಥಳ ಪ್ರವಾಸಿ ತಾಣಗಳನ್ನು ಪರಿಗಣಿಸಿದ್ದು, ಮುಂಬರುವ ದಿನಗಳಲ್ಲಿ ಪ್ರಮುಖ ಪ್ರವಾಸಿ ಸ್ಥಳಗಳನ್ನು ಒಳಗೊಂಡಂತೆ ಸರ್ಕ್ಯೂಟ್ ರಚಿಸಲು ಹೆಲಿ ಟೂರಿಸಂ ಸೇವಾ ಪೂರೈಕೆದಾರರಿಗೆ ತಿಳಿಸಲಾಗಿರುತ್ತದೆ.<br><br>ಕರ್ನಾಟಕ ರಾಜ್ಯದಲ್ಲಿ ಹೆಲಿ ಟೂರಿಸಂ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ (ಕೆ.ಎಸ್.ಟಿ.ಡಿ.ಸಿ.) ವನ್ನು ನೋಡಲ್ ಏಜೆನ್ಸಿಯಾಗಿ ನಿಯೋಜಿಸಲಾಗಿದ್ದು, ಕೆ.ಎಸ್.ಟಿ.ಡಿ.ಸಿ. ಮೂಲಕ ಹೆಲಿಕಾಪ್ಟರ್ ಸೇವಾ ಪೂರೈಕೆದಾರರಾದ ತುಂಬಿ ಏವಿಯೇಷನ್ ಪ್ರೈವೇಟ್ ಲಿಮಿಟೆಡ್ ಮತ್ತು ಬಿಪ್ಸನ್ ಏವಿಯೇಷನ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯವರೊಂದಿಗೆ ಜನವರಿ-2022ರಲ್ಲಿ ಒಪ್ಪಂದ ಮಾಡಿಕೊಳ್ಳಲಾಗಿರುತ್ತದೆ.</td></tr>
</table>

| | | |
|---|---|---|
| ಇ) | ಸದರಿ 'ಹೆಲಿ ಟ್ಯೂರಿಸಂ' ಯೋಜನೆಯಡಿ ಪರಿಗಣಿಸಿರುವ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸರ್ಕಾರ ಇದುವರೆಗೆ ರೂಪಿಸಿರುವ ಕಾರ್ಯಕ್ರಮಗಳೇನು? | ಈ ಯೋಜನೆಯಡಿ ಪರಿಗಣಿಸಿರುವ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವಂತಹ ಮೂಲಸೌಲಭ್ಯಗಳ (Basic amenities) ಬಗ್ಗೆ ಪರಿಶೀಲಿಸಿ, ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಲಭ್ಯತೆಗೆ ಅನುಗುಣವಾಗಿ ಮೂಲಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. |

**TOR 238 TDV 2022**

09/22

**(ಆನಂದ್ ಸಿಂಗ್)**
ಪ್ರವಾಸೋದ್ಯಮ, ಜೀವಿಶಾಸ್ತ್ರ,
ಹಾಗೂ ಪರಿಸರ ಸಚಿವರು